**ದಿನಾಂಕಃ 02-09-2024 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನವನ್ನು ಬೋಧಿಸಲಾಯಿತು .**

**ಮುಂದುವರೆದ ಪಾಟೀ ಸವಾಲುಃ 1 ಮತ್ತು 2 ನೇ ಪ್ರತಿವಾದಿಗಳ ಪರ ಶ್ರೀ.ಐ.ಪಿ.ಕೆ.ವಕೀಲರಿಂದಃ**

8 ಆಸ್ತಿಗಳ ಮೇಲೆ ನಾವು ಈ ದಾವೆಯನ್ನು ಹಾಕಿರುತ್ತೇವೆ . ಸಾಕ್ಷಿ ಮುಂದುವರೆದು 7 ಆಸ್ತಿಗಳ ಬಗ್ಗೆ ದಾವೆ ಹಾಕಿದ್ದು ಇನ್ನೂ ಒಂದು ಆಸ್ತಿ ಇರುತ್ತದೆ ಎಂದು ಹೇಳುತ್ತಾರೆ. ದಾವಾ ಐಟಂ ನಂ.2 ಮತ್ತು 3 ಮಾತ್ರ ಪಿತ್ರಾರ್ಜಿತ ಆಸ್ತಿಗಳಾಗಿರುತ್ತವೆ ಎಂದರೆ ಸರಿಯಲ್ಲ. ಐಟಂ ನಂ.1 ನೇ ಆಸ್ತಿಯನ್ನು 2 ನೇ ಪ್ರತಿವಾದಿಯು 2001 ನೇ ಇಸವಿಯಲ್ಲಿ ಖರೀದಿ ಮಾಡಿರುತ್ತಾರೆ ಎಂದರೆ ಸಾಕ್ಷಿ ಒಟ್ಟು ಕುಟುಂಬದ ಆಸ್ತಿಯ ಆದಾಯದಿಂದಲೇ ಆ ಆಸ್ತಿಯನ್ನು ಖರೀದಿಸಿರುತ್ತಾರೆ ಎಂದು ಹೇಳುತ್ತಾರೆ. ಐಟಂ ನಂ.1 ನೇ ಆಸ್ತಿ 2 ನೇ ಪ್ರತಿವಾದಿಯವರ ಸ್ವಯಾರ್ಜಿ ಆಸ್ತಿ ಎಂದರೆ ಸರಿಯಲ್ಲ. ಐಟಂ ನಂ.4 ಮತ್ತು 5 ನೇ ಆಸ್ತಿಗಳೂ ಸಹ ಪಿತ್ರಾರ್ಜಿ ಆಸ್ತಿಗಳಾಗಿದ್ದು 1 ನೇ ಪ್ರತಿವಾದಿಯವರು ಅದನ್ನು ತಮ್ಮ ಹೆಸರಿಗೆ ಮಾಡಿಕೊಂಡಿರುತ್ತಾರೆ. ಐಟಂ ನಂ.4 ಮತ್ತು 5 ನೇ ಆಸ್ತಿಗಳನ್ನು 1 ನೇ ಪ್ರತಿವಾದಿಯವರ ತಂದೆಯ ಸಹೋದರನಾದ ಹನುಮಂತಪ್ಪ 1 ನೇ ಪ್ರತಿವಾದಿಯವರಿಗೆ ಕೊಟ್ಟಿರುತ್ತಾರೆ ಎಂದರೆ ಸರಿಯಲ್ಲ. ಐಟಂ ನಂ.7 ನೇ ಆಸ್ತಿಯನ್ನು ಭೂ-ನ್ಯಾಯ ಮಂಡಳಿಯ ಆದೇಶದ ಪ್ರಕಾರ 1 ನೇ ಪ್ರತಿವಾದಿಯವರ ಹೆಸರಿಗೆ ಆಗಿರುತ್ತದೆ ಎಂದರೆ ಸಾಕ್ಷಿ 1 ನೇ ಪ್ರತಿವಾದಿಯೇ ಮನೆಯ ವ್ಯವಹಾರ ನೋಡಿಕೊಳ್ಳುತ್ತಿದ್ದರಿಂದ ಆ ಜಮೀನನ್ನು ತಮ್ಮ ಹೆಸರಿಗೆ ಮಾಡಿಕೊಂಡಿರುತ್ತಾರೆ ಎಂದು ಹೇಳುತ್ತಾರೆ. ಐಟಂ ನಂ.7 ನೇ ಆಸ್ತಿಯನ್ನು 1 ನೇ ಪ್ರತಿವಾದಿ ತನ್ನ ಹೆಸರಿಗೆ ಯಾವಾಗ ಮಾಡಿಕೊಂಡಿರುತ್ತಾರೆ ಎಂದು ನನಗೆ ಗೊತ್ತಿರುವುದಿಲ್ಲ.

ನನ್ನ ತಂದೆಯವರು ಈಗ ಮಾಗೋಡ ನಲ್ಲಿ ಇರುತ್ತಾರೆ. ನನ್ನ ತಂದೆಯವರು

ಕುಕ್ಕುವಾಡದಲ್ಲಿ ವಾಸವಾಗಿರುತ್ತಾರೆ ಎಂದರೆ ಸರಿಯಲ್ಲ. ನನ್ನ ತಾಯಿ ಅನಗವಾಡಿ ಯಲ್ಲಿರುತ್ತಾರೆ , ಅದು ನನ್ನ ತಾಯಿಯ ತಂದೆಯ ಮನೆಯಾಗಿರುತ್ತದೆ. ನನ್ನ ತಂದೆ ಮತ್ತು ತಾಯಿ ಅನಗವಾಡಿಯಲ್ಲಿಯೇ ವಾಸವಾಗಿರುತ್ತಾರೆ ಎಂದರೆ ಸರಿಯಲ್ಲ. ನನ್ನ ತಂದೆ ಮಾಗೋಡದಲ್ಲಿ ವಾಸವಾಗಿದ್ದಾರೆ ಎನ್ನುವ ಬಗ್ಗೆ ಆಧಾರ ಕಾರ್ಡ ಹಾಜರು ಪಡಿಸಿರುತ್ತೀರಾ ಎಂದರೆ ಸಾಕ್ಷಿ ನನ್ನ ತಂದೆಯ ಜೊತೆಗೆ ಸಂಬಂಧ ಚೆನ್ನಾಗಿ ಇಲ್ಲ ಎಂದು ಹೇಳುತ್ತಾರೆ. ನಾನು ನನ್ನ ತಂದೆಯ ಜೊತೆಗೆ ಮೀಲಾಪೆಯಾಗಿ ಸುಳ್ಳು ದಾವೆ ಹಾಕಿರುತ್ತೇನೆ ಎಂದರೆ ಸರಿಯಲ್ಲ.

ನನ್ನ ಅಕ್ಕ ಮಂಜುಳಾ ಪಿಯುಸಿ ವರೆಗೆ ಓದಿರುತ್ತಾರೆ. ನಾನು ಟಿ.ಸಿಹೆಚ್ ನ್ನು ಹದಡಿ ಗ್ರಾಮದಲ್ಲಿ ಮಾಡಿರುತ್ತೇನೆ. ನನ್ನ ಟಿ.ಸಿಹೆಚ್ ಓದಿಗೆ 1 ನೇ ಪ್ರತಿವಾದಿಯೇ ಡೊನೆಶನ್ ಕೊಟ್ಟಿರುತ್ತಾರೆ ಎಂದರೆ ಸರಿಯಲ್ಲ. ನನ್ನ ಅಪರೇಶನ್ ಕಾಲಕ್ಕೆ 1 ನೇ ಪ್ರತಿವಾದಿ ಹಣ ಕೊಟ್ಟಿರುತ್ತಾರೆ ಎಂದರೆ ಸರಿಯಲ್ಲ. ಐಟಂ ನಂ.2 ಮತ್ತು 3 ರಲ್ಲಿ ಮಾತ್ರ ವಾದಿ ಮತ್ತು ಪ್ರತಿವಾದಿಯವರಿಗೆ ಹಕ್ಕು ಇರುತ್ತದೆ ಎಂದರೆ ಸಾಕ್ಷಿ ಎಲ್ಲಾ ದಾವಾ ಆಸ್ತಿಗಳಲ್ಲಿಯೂ ಹಕ್ಕು ಇರುತ್ತದೆ ಎಂದು ಹೇಳುತ್ತಾರೆ. ನನ್ನ ತಂದೆ ಕುಡಿದು ಹಾಳು ಮಾಡುತ್ತಿದ್ದಾರೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ**4 ರಿಂದ 8 ನೇ ಪ್ರತಿವಾದಿಗಳ ಪರ ವಕೀಲರಾದ ಶ್ರೀ.ಜಿ.ಎನ್.ಹೆಚ್ ವಕೀಲರು 1 ಮತ್ತು 2 ನೇ ಪ್ರತಿವಾದಿ ಪರ ವಕೀಲರು ಮಾಡಿದ ಪಾಟೀ ಸವಾಲನ್ನು ಅಳವಡಿಸಿ ಕೊಂಡಿರುತ್ತಾರೆ.

**ಮರು ವಿಚಾರಣೆಃ ಏನೂ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ.)

ಓ. ಹೇ. ಕೇ. ಸರಿ ಇದೆ.

ಸಹಿ/-

2 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು,
ಮತ್ತು ಜೆಎಂಎಫ್ ಸಿ ರಾಣೇಬೆನ್ನೂರು.